## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 629 |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವ ಸಚಿವರು | : | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದಲ್ಲಿ ಖಾಲಿಯಿರುವ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಹೊರಡಿಸಿರುವ ಮಾರ್ಗಸೂಚಿಗಳು ಯಾವುವು; ಮತ್ತು ಮಾರ್ಗಸೂಚಿಯಂತೆ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಗೂ ನಿಗಮ ಮತ್ತು ಮಂಡಳಿಗಳಲ್ಲಿ ಯಾವ ಸರ್ಕಾರಿ ಏಜೆನ್ಸಿ ಮುಖೇನ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ; (ಪೂರ್ಣ ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಕಾರ್ಮಿಕ ಆಯುಕ್ತಾಲಯ ಹಾಗೂ ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಡಳಿಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಹೊರಡಿಸಿರುವ ಮಾರ್ಗಸೂಚಿಗಳ ವಿವರ ಈ ಕೆಳಕಂಡಂತಿರುತ್ತದೆ.<br><br><u>ಕಾರ್ಮಿಕ ಆಯುಕ್ತಾಲಯ:</u> ಸರ್ಕಾರದ ದಿನಾಂಕ: 22.03.2019ರ ಆದೇಶದಲ್ಲಿ ಮಂಜೂರಾದ ಹುದ್ದೆಗಳಲ್ಲಿ ಖಾಲಿ ಇದ್ದ ಹುದ್ದೆಗಳಿಗೆ ಎದುರಾಗಿ ಕಾರ್ಯನಿರ್ವಹಿಸುತ್ತಿದ್ದ ಗ್ರೂಪ್ ಡಿ, ಬೆರಳಚ್ಚುಗಾರರು/ ಡಿ.ಇ.ಒ ಮತ್ತು ವಾಹನ ಚಾಲಕರುಗಳನ್ನು ಮಾತ್ರ ಹೊರಗುತ್ತಿಗೆ ಮೇಲೆ ಮುಂದುವರೆಸಬಹುದು ಅಥವಾ ಹೊರಗುತ್ತಿಗೆ ಅವಧಿ ಪೂರ್ಣಗೊಂಡಿದ್ದಲ್ಲಿ KTPP (Karnataka Transparent Public Procurement) ಅಧಿನಿಯಮದ ಪ್ರಕಾರ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಬಹುದು ಎಂದು ಮಾರ್ಗಸೂಚಿ ಇರುತ್ತದೆ.<br><br>ಈ ಮಾರ್ಗಸೂಚಿಯನ್ವಯ ಈ ಇಲಾಖೆಯಲ್ಲಿ KTPP ನಿಯಮದನ್ವಯ ಟೆಂಡರ್ ಕರೆದು, ಟೆಂಡರ್‌ನಲ್ಲಿ ಯಶಸ್ವಿದಾರರಾದ ಸಂಸ್ಥೆಯವರ ಮೂಲಕ ಹೊರಗುತ್ತಿಗೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.<br><br>ಪ್ರಸ್ತುತ ಕಾರ್ಮಿಕ ಆಯುಕ್ತಾಲಯದಲ್ಲಿ ಮೆ: ಶಾರ್ಪ್‌ವಾಚ್ ಇನ್ವೆಸ್ಟಿಗೇಷನ್ ಸೆಕ್ಯೂರಿಟಿ ಸರ್ವಿಸಸ್ ಪ್ರೈ., ಲಿ., ಸರಸ್ವತಿಪುರಂ, ಮೈಸೂರು 570009 ಹಾಗೂ ಮೆ: ಪನ್ನಗ ಎಂಟರ್‌ಪ್ರೈಸಸ್, 228, 2ನೇ ಮಹಡಿ, 1ನೇ ಮುಖ್ಯ ರಸ್ತೆ, ಗಣೇಶ ದೇವಸ್ಥಾನದ ಹತ್ತಿರ, ಗೋಕುಲಂ, ಮೈಸೂರು 570002 ಈ ಏಜೆನ್ಸಿಗಳ ಮೂಲಕ ಹೊರಗುತ್ತಿಗೆ ನೌಕರರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ.<br><br><u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u> ಈ ಮಂಡಳಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಿರುವುದಿಲ್ಲ. ಆದರೆ, ಮಂಡಳಿಯ ಆಡಳಿತ ನಿರ್ವಹಣೆ ಮುಂತಾದ ಕೆಲಸ ಕಾರ್ಯಗಳನ್ನು ಕಾರ್ಮಿಕ ಇಲಾಖೆಯಿಂದ ಎರವಲು ಸೇವೆಯ ಮೇಲೆ ಅಧಿಕಾರಿಗಳನ್ನು ಪಡೆದು ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡು ಕಾರ್ಯನಿರ್ವಹಿಸಲಾಗುತ್ತಿದೆ. ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಳ್ಳಲು ಕೆ.ಟಿ.ಪಿ.ಪಿ. ಕಾಯ್ದೆಯ ಪ್ರಾವಧಾನಗಳನ್ವಯ ಟೆಂಡರ್ ಕರೆದು ಏಜೆನ್ಸಿಯನ್ನು ಆಯ್ಕೆ ಮಾಡಲಾಗುವುದು.<br><br><u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u> ಈ ಮಂಡಳಿಯಲ್ಲಿ ಖಾಲಿಯಿರುವ ಗ್ರೂಪ್ 'ಡಿ' ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಈ ಕೆಳಗಿನ ಆದೇಶಗಳನ್ವಯ ನೇಮಕ ಮಾಡಲಾಗುತ್ತದೆ. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 06 ಸೆನೆನಿ 2024 ದಿನಾಂಕ: 20.05.2024 ರ ಮಾರ್ಗಸೂಚಿಯನುಸಾರ, ಕೆ.ಟಿ.ಪಿ.ಪಿ. ನಿಯಮಗಳನ್ವಯ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಆಇ 08 ಟಿಎಫ್‌ಒ 2023, ದಿನಾಂಕ: 28.10.2024 ರ ಸಾಮಾನ್ಯ ವಿತ್ತಾಧಿಕಾರದ ಆದೇಶಗಳನ್ವಯ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. |

| | | |
|---|---|---|
| | | ಪ್ರಸ್ತುತ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ಮೆ. ಪೂಜ್ಯಾಯ ಸೆಕ್ಯೂರಿಟಿ ಸರ್ವೀಸಸ್, ಬೆಂಗಳೂರು ಸಂಸ್ಥೆಯನ್ನು ಕೆ.ಟಿ.ಪಿ.ಪಿ. ನಿಯಮಗಳನ್ವಯ 2024-25ನೇ ಸಾಲಿಗೆ ಹೊರಗುತ್ತಿಗೆ ಸಿಬ್ಬಂದಿಯನ್ನು ಒದಗಿಸಲು ಆದೇಶ ನೀಡಲಾಗಿರುತ್ತದೆ. |
| ಆ) | ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿಯಲ್ಲಿ ಮೀಸಲಾತಿಯನ್ನು ಕಡ್ಡಾಯ ಮಾಡಲಾಗಿದೆಯೇ; ಮತ್ತು ಮೀಸಲಾತಿಯನ್ನು ಪರಿಶೀಲಿಸಲು ನೇಮಕ ಮಾಡಿರುವ ವ್ಯವಸ್ಥೆ ಯಾವುವು; (ಪೂರ್ಣ ಮಾಹಿತಿ ನೀಡುವುದು) | ಹೌದು.<br><br>ಸರ್ಕಾರದ ಸುತ್ತೋಲೆ ಸಂ. ಸಿಆಸುಇ 06 ಸೆನೆನಿ 2024, ದಿನಾಂಕ: 20.05.2024 ರನ್ವಯ ಮೀಸಲಾತಿಯನ್ನು ಕಡ್ಡಾಯ ಮಾಡಲಾಗಿದ್ದು, ಅದರಂತೆ, ಕಾರ್ಮಿಕ ಆಯುಕ್ತಾಲಯದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿಯಲ್ಲಿ ಮೀಸಲಾತಿಯನ್ನು ಅನುಸರಿಸಲಾಗುತ್ತಿದೆ. |
| ಇ) | ರಾಜ್ಯ ಸರ್ಕಾರ ಹೊರಗುತ್ತಿಗೆ ನೌಕರರನ್ನು ಮಧ್ಯವರ್ತಿಗಳ ಹಾವಳಿ ಮತ್ತು ಏಜೆನ್ಸಿಗಳ ಶೋಷಣೆಯಿಂದ ರಕ್ಷಿಸಲು ಕೈಗೊಂಡಿರುವ ಕ್ರಮಗಳು ಯಾವುವು? (ಪೂರ್ಣ ಮಾಹಿತಿ ನೀಡುವುದು) | ರಾಜ್ಯ ಸರ್ಕಾರ ಹೊರಗುತ್ತಿಗೆ ನೌಕರರನ್ನು ಮಧ್ಯವರ್ತಿಗಳ ಹಾವಳಿ ಮತ್ತು ಏಜನ್ಸಿಗಳ ಶೋಷಣೆಯಿಂದ ರಕ್ಷಿಸಲು ಬೀದರ್ ಜಿಲ್ಲೆಯಲ್ಲಿ ಸರ್ಕಾರದ ವಿವಿಧ ಇಲಾಖೆಗಳಿಗೆ ಹೊರಗುತ್ತಿಗೆ ನೌಕರರನ್ನು ನಿಯೋಜಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ 2008 ರಲ್ಲಿ ರಚನೆಯಾಗಿರುವ "ಬೀದರ್ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ" ವು ಅಸ್ತಿತ್ವದಲ್ಲಿದ್ದು ಸದರಿ ಸಂಘದ ಮಾದರಿಯಲ್ಲಿ ಪ್ರಸ್ತುತ ಮೈಸೂರು, ಧಾರವಾಡ ಮತ್ತು ತುಮಕೂರು ಜಿಲ್ಲೆಗಳಲ್ಲಿ ಹೊರಗುತ್ತಿಗೆ ಕಾರ್ಮಿಕರ ಸೇವೆಗಳನ್ನು ಒದಗಿಸುವ ಸಂಬಂಧ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 7 ರನ್ವಯ ಸಹಕಾರ ಸಂಘ (ಸೊಸೈಟಿ) ಅನ್ನು ನೋಂದಾಯಿಸಲು ಸರ್ಕಾರವು ನಡವಳಿ ಸಂಖ್ಯೆ:ಕಾಇ 301 ಎಲ್‌ಡಬ್ಲ್ಯೂಎ 2023, ದಿನಾಂಕ:01.10.2024ರನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತದೆ.<br><br>ಮುಂದುವರೆದು, ಕಾರ್ಮಿಕ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಕನಿಷ್ಠ ವೇತನ ಕಾಯ್ದೆ, 1948, ವೇತನ ಪಾವತಿ ಕಾಯ್ದೆ, 1936, ಗುತ್ತಿಗೆ ಕಾರ್ಮಿಕ ಕಾಯ್ದೆ, 1970, ಉಪಧನ ಪಾವತಿ ಕಾಯ್ದೆ, 1972, ಹೆರಿಗೆ ಭತ್ಯೆ ಕಾಯ್ದೆ, 1961 ಹಾಗೂ ಅನ್ವಯಿಸುವ ಇತರೆ ಕಾರ್ಮಿಕ ಕಾಯ್ದೆಗಳನ್ವಯ ನಿರ್ದಿಷ್ಟ ದೂರುಗಳು ಬಂದಲ್ಲಿ ಸರ್ಕಾರದಿಂದ ಸದರಿ ಕಾಯ್ದೆಗಳಡಿ ಅಧಿಸೂಚಿಸಲ್ಪಟ್ಟ ಕಾರ್ಯವ್ಯಾಪ್ತಿಯ ನಿರೀಕ್ಷಕರು/ ಅಧಿಕಾರಿಗಳು ತಪಾಸಣೆ ನಡೆಸುವ ಮೂಲಕ/ ಕಾಲಕಾಲಕ್ಕೆ ತಪಾಸಣೆ ನಡೆಸುವ ಸಂದರ್ಭದಲ್ಲಿ ಕಾರ್ಮಿಕರ ಹೇಳಿಕೆ ಹಾಗೂ ವೇತನ ಪಾವತಿ ಮಾಡಿದ ದಾಖಲೆಗಳನ್ನು ಪರಿಶೀಲಿಸಿ, ವೇತನ ಪಾವತಿಯಾದ ಬಗ್ಗೆ ದೃಢೀಕರಿಸಿಕೊಳ್ಳಲಾಗುತ್ತಿದೆ. ನಿಗದಿತ ವೇತನಕ್ಕಿಂತ ಕಡಿಮೆ ವೇತನ ನೀಡುವುದು ಹಾಗೂ ನಿಗದಿತ ಸಮಯಕ್ಕೆ ವೇತನ ನೀಡದಿದ್ದ ಪಕ್ಷದಲ್ಲಿ ನಿಯಮಾನುಸಾರ ಕ್ರಮಕೈಗೊಂಡು ಅರ್ಹ ನೌಕರರಿಗೆ ಸೂಕ್ತ ಪರಿಹಾರ ಕೊಡಿಸಲಾಗುವುದು. |

ಸಂಖ್ಯೆ: ಕಾಇ 516 ಎಲ್ ಡಬ್ಲ್ಯೂಎ 2024

(ಸಂತೋಷ್ ಎಸ್. ಲಾಡ್)
ಕಾರ್ಮಿಕ ಸಚಿವರು